ತುಮಕೂರು ವಿಶ್ವವಿದ್ಯಾನಿಲಯ

ಪರೀಕ್ಷಾ ಭವನ, ಬಿ.ಹೆಚ್. ರಸ್ತೆ, ತುಮಕೂರು – 572 103 ☎:0816-2255650,2273511 ಫ್ಯಾಕ್ಸ್:0816-2270719

ಸಂಖ್ಯೆ:ತುವಿ:ಪವಿ:2025-26: 147

ದಿನಾಂಕ:23.05.2025

**CBCS**

# : ಅಧಿಸೂಚನೆ :

**ವಿಷಯ** : 2025 ರ ಜುಲೈ ಮಾಹೆಯಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ 2019-20 & 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ಪೂರಕ) ಪರೀಕ್ಷಾ ಶುಲ್ಕ ಪಾವತಿಸಿಕೊಳ್ಳುವ ಕುರಿತು.

**ಉಲ್ಲೇಖ** : 1. ಪ್ರಥಮ ಸಾಮಾನ್ಯ ಸಿಂಡಿಕೇಟ್ ಸಭೆಯ ನಿರ್ಣಯದ ದಿನಾಂಕ:20.01.2023

2. ಮಾನ್ಯ ಕುಲಪತಿಯವರ ಅನುಮೋದನೆಯ ದಿನಾಂಕ:19.05.2025

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, 2025 ರ ಜುಲೈ ಮಾಹೆಯಲ್ಲಿ ನಡೆಯಲಿರುವ ವಿವಿಧ ಸ್ನಾತಕ ಪದವಿಗಳಾದ ಬಿ.ಎ./ಬಿ.ಎಸ್.ಡಬ್ಲ್ಯೂ/ಬಿ.ಎಸ್ಸಿ./ಬಿ.ಎಸ್ಸಿ.(ಫ್ಯಾಷನ್ ಅಂಡ್ ಅಪಾರೆಲ್ ಡಿಸೈನ್)/ಬಿ.ಸಿ.ಎ./ಬಿ.ಕಾಂ./ಬಿ.ಬಿ.ಎಂ. ಮತ್ತು **B.VOC. In HARDWARE TECHNOLOGY & NETWORKING** ಪದವಿಗಳ **II, IV & VI** ನೇ ಸೆಮಿಸ್ಟರ್, ಬಿ.ಎ. ಇಂಟಿಗ್ರೇಟೆಡ್ ಕನ್ನಡ ಪಂಡಿತ್ ಪದವಿಯ **VI, VIII & X** ನೇ ಸೆಮಿಸ್ಟರ್, ಬಿ.ಎಫ್.ಎ./ಬಿ.ವಿ.ಎ. ಪದವಿಯ **II, IV, VI, VIII & X** ನೇ ಸೆಮಿಸ್ಟರ್ ಪರೀಕ್ಷೆಗಳಿಗೆ ಸಂಬಂಧಿಸಿದಂತೆ **2019-20 & 2020-21** ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ಪೂರಕ) ಪರೀಕ್ಷಾ ಶುಲ್ಕವನ್ನು ಪಾವತಿಸಿಕೊಳ್ಳುವುದು. ಪರೀಕ್ಷೆಗಳಿಗೆ ಹಾಜರಾಗುವ ವಿದ್ಯಾರ್ಥಿಗಳ ಶುಲ್ಕದ ವಿವರಗಳನ್ನು ಮತ್ತು ಪರೀಕ್ಷೆ ತೆಗೆದುಕೊಂಡ ವಿಷಯಗಳನ್ನು ಆನ್‌ಲೈನ್‌ನಲ್ಲಿ ಸ್ಪಷ್ಟವಾಗಿ ನಮೂದಿಸುವುದು.

ಆನ್‌ಲೈನ್ ಪರೀಕ್ಷಾ ಅರ್ಜಿಗಳ ಆಧಾರದಲ್ಲಿ ಪ್ರಶ್ನೆ ಪತ್ರಿಕೆಗಳನ್ನು ವಿತರಿಸಲಿದ್ದು, ಪ್ರತ್ಯೇಕವಾಗಿ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ. ವಿಷಯಗಳಿಗೆ/ಪತ್ರಿಕೆಗಳಿಗೆ ಕೋಡ್‌ಗಳನ್ನು ಪರಿಶೀಲಿಸಿ ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿಯನ್ನು ಸಲ್ಲಿಸತಕ್ಕದ್ದು. ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿಷಯ/ಪತ್ರಿಕೆಗಳ ಕೋಡ್‌ನ್ನು ತಪ್ಪಾಗಿ ನಮೂದಿಸಿದಲ್ಲಿ ಈ ಕಾರಣದಿಂದಾಗಿ ಪ್ರಶ್ನೆ ಪತ್ರಿಕೆಯಲ್ಲಿನ ಸರಬರಾಜು ಮಾಡುವುದರಲ್ಲಿ ವ್ಯತ್ಯಾಸವಾದಲ್ಲಿ ಸಂಬಂಧಪಟ್ಟ ಪ್ರಾಂಶುಪಾಲರನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.

## ಗಮನಿಸಬೇಕಾದ ದಿನಾಂಕಗಳು

| | | |
|---|---|---|
| 1. | ವಿದ್ಯಾರ್ಥಿಗಳಿಗೆ ದಂಡ ರಹಿತ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 03.06.2025 |
| 2. | ವಿದ್ಯಾರ್ಥಿಗಳಿಗೆ ರೂ. 100-00/- ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 06.06.2025 |
| 3. | ವಿದ್ಯಾರ್ಥಿಗಳಿಗೆ ರೂ. 500-00/- ವಿಶೇಷ ದಂಡ ಶುಲ್ಕದೊಂದಿಗೆ ಶುಲ್ಕ ಪಾವತಿಸಲು ಕೊನೆಯ ದಿನಾಂಕ | 09.06.2025 |
| 4. | ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಲು ಕೊನೆಯ ದಿನಾಂಕ | 12.06.2025 |
| 5. | ಕಾಲೇಜಿನವರು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸಲು ಕೊನೆಯ ದಿನಾಂಕ | 13.06.2025 |

Notice Board
23/5

| ನಿಗಧಿಪಡಿಸಿರುವ ಪರೀಕ್ಷಾ ಶುಲ್ಕದ ವಿವರಗಳು | | | | |
|---|---|---|---|---|
| ಕ್ರ.ಸಂ. | ಸೆಮಿಸ್ಟರ್ | ಕೋರ್ಸ್ | ನವೀನ | ಪೂರಕ (ಒಂದು ವಿಷಯಕ್ಕೆ) |
| 1. | II , IV & VI | ಬಿ.ಎ./ಬಿ.ಎಸ್.ಡಬ್ಲ್ಯೂ./ಬಿ.ಎಸ್ಸಿ./ಬಿ.ಎಸ್ಸಿ. (ಫ್ಯಾಷನ್ & ಅಪಾರೆಲ್ ಡಿಸೈನ್)/B.VOC./ ಬಿ.ಕಾಂ./ಬಿ.ಬಿ.ಎಂ./ಬಿ.ಸಿ.ಎ. | ರೂ. 1,000–00/- | ರೂ. 100–00/- |
| 2. | VI , VIII & X | ಬಿ.ಎ. ಇಂಟಿಗ್ರೇಟೆಡ್ ಕನ್ನಡ ಪಂಡಿತ್ ಪದವಿ | ರೂ. 1,000–00/- | ರೂ. 100–00/- |
| 3. | II , IV , VI , VIII & X | ಬಿ.ಎಫ್.ಎ./ಬಿ.ವಿ.ಎ. | ರೂ. 1,000–00/- | ರೂ. 100–00/- |

ವಿ.ಸೂ.: **2019-20 & 2020-21 ನೇ ಶೈಕ್ಷಣಿಕ ಸಾಲಿನಲ್ಲಿ ಪ್ರವೇಶ ಪಡೆದಿರುವ ಎಲ್ಲಾ ಅರ್ಹ ವಿದ್ಯಾರ್ಥಿಗಳಿಂದ (ಪೂರಕ) ಮಾತ್ರ ಪರೀಕ್ಷಾ ಶುಲ್ಕ ಪಾವತಿಸಿಕೊಂಡು ಸದರಿ ವಿದ್ಯಾರ್ಥಿಗಳ ವಿವರವನ್ನು EMS ನಲ್ಲಿ ಕಡ್ಡಾಯವಾಗಿ ನಮೂದಿಸುವುದು.**

ಎಲ್ಲಾ ವರ್ಗಗಳ ವಿದ್ಯಾರ್ಥಿಗಳು ಈ ಕೆಳಗೆ ನಮೂದಿಸಿರುವ ಇತರೆ ಶುಲ್ಕಗಳನ್ನು ಕಡ್ಡಾಯವಾಗಿ ಪಾವತಿಸುವುದು. (ಅನ್ವಯಿಸುವ ಶುಲ್ಕಗಳು ಮಾತ್ರ)

| ಕ್ರ.ಸಂ. | ಇತರೆ ಶುಲ್ಕಗಳ ವಿವರ | ಮೊತ್ತ (ರೂ. ಗಳಲ್ಲಿ) |
|---|---|---|
| 1. | ಅಂಕಪಟ್ಟಿ ಶುಲ್ಕ (ಪ್ರತಿ ಸೆಮಿಸ್ಟರ್‌ಗೆ) | 156-00/- |
| 2. | ಆನ್‌ಲೈನ್ ಅರ್ಜಿ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 25-00/- |
| 3. | ಅರ್ಜಿ ಪರಿಶೀಲನಾ ಶುಲ್ಕ (ಪ್ರತಿ ವಿದ್ಯಾರ್ಥಿಗೆ) | 10-00/- |
| 4. | ಪರೀಕ್ಷಾ ಸಿದ್ಧತಾ ಶುಲ್ಕ (Processing fee) (ಪ್ರತಿ ಸೆಮಿಸ್ಟರ್‌ಗೆ) | 35-00/- |
| 5. | ಪ್ರಾಯೋಗಿಕ ಪರೀಕ್ಷಾ ಶುಲ್ಕ (ಒಂದು ವಿಷಯಕ್ಕೆ) | 50-00/- |
| 6. | ಮೌಖಿಕ ಸಂದರ್ಶನ ( Viva Voce ) (ಒಂದು ವಿಷಯಕ್ಕೆ) | 150-00/- |
| 7. | ಪ್ರಾಜೆಕ್ಟ್ ವ್ಯಾಲ್ಯೂವೇಷನ್ ( Project Evaluation ) (ಒಂದು ವಿಷಯಕ್ಕೆ) | 100-00/- |

- ಅರ್ಜಿ ಪರಿಶೀಲನಾ ಶುಲ್ಕ ರೂ. 10–00/- ಗಳಲ್ಲಿ ರೂ. 06–00/- ಗಳನ್ನು ಪರೀಕ್ಷಾ ಕೇಂದ್ರದಲ್ಲಿ ಉಳಿಸಿಕೊಂಡು ಉಳಿದ ರೂ. 04–00/- ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು. ಜೋಡಣೆ ಮಾಡಲಾದ ಕಾಲೇಜಿನವರು ತಮ್ಮ ಕಾಲೇಜಿನ ಪರೀಕ್ಷಾ ಕೇಂದ್ರಕ್ಕೆ ಸಲ್ಲಿಸುವುದು.
- ಆನ್‌ಲೈನ್ ಅರ್ಜಿ ಶುಲ್ಕ ರೂ. 25–00/- ಗಳಲ್ಲಿ ರೂ. 05–00/- ಗಳನ್ನು ಕಾಲೇಜಿನವರು ಉಳಿಸಿಕೊಂಡು ಉಳಿದ ರೂ. 20– 00/- ಗಳನ್ನು ವಿಶ್ವವಿದ್ಯಾನಿಲಯದ ಖಾತೆಗೆ ಜಮಾ ಮಾಡುವುದು.

ಉಲ್ಲೇಖ (1) ರ ದಿನಾಂಕ:20.01.2023 ರ ಸಿಂಡಿಕೇಟ್ ಸಭಾ ನಿರ್ಣಯದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಹಾಗೂ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನ ಸರ್ಕಾರದ ಡಿಬಿಟ (Direct Beneficiary Transfer) ಯೋಜನೆಯಡಿಯಲ್ಲಿ ನೇರವಾಗಿ ವಿದ್ಯಾರ್ಥಿಗಳ ಖಾತೆಗೆ ಜಮೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಸಂಬಂಧಪಟ್ಟ ಕಾಲೇಜಿಗಾಗಲಿ ಅಥವಾ ವಿಶ್ವವಿದ್ಯಾನಿಲಯಕ್ಕಾಗಲಿ ವಿದ್ಯಾರ್ಥಿ ವೇತನವು ಮಂಜೂರಾಗದ ಹಿನ್ನೆಲೆಯಲ್ಲಿ ಎಲ್ಲಾ ವರ್ಗದ ವಿದ್ಯಾರ್ಥಿಗಳಿಂದ ಪೂರ್ಣ ಪ್ರಮಾಣದ ಪರೀಕ್ಷಾ ಶುಲ್ಕವನ್ನು ಸೆಮಿಸ್ಟರ್‌ವಾರು ಕಡ್ಡಾಯವಾಗಿ ಪಾವತಿಸಿಕೊಳ್ಳುವುದು (ನವೀನ & ಪೂರಕ) ವಿದ್ಯಾರ್ಥಿಯು ಪರೀಕ್ಷಾ ಶುಲ್ಕ ಪಾವತಿಸಿದಾಕ್ಷಣ ಪರೀಕ್ಷೆ ಬರೆಯಲು ಅರ್ಹನೆಂದು ತಿಳಿಯಬಾರದು. ವಿಶ್ವವಿದ್ಯಾನಿಲಯದ ನಿಯಮಾನುಸಾರ ಅರ್ಹತೆಯಿದ್ದಲ್ಲಿ ಮಾತ್ರ ಪರೀಕ್ಷೆ ಬರೆಯಲು ಅವಕಾಶವಿರುತ್ತದೆ. ಯಾವುದೇ ಕಾರಣಕ್ಕೂ ಪರೀಕ್ಷಾ ಕೇಂದ್ರವನ್ನು ಬದಲಾಯಿಸುವಂತಿಲ್ಲ.

ವಿಶ್ವವಿದ್ಯಾನಿಲಯದಿಂದ ಪ್ರವೇಶಾನುಮೋದನೆ ಪಡೆದ ಅರ್ಹ ವಿದ್ಯಾರ್ಥಿಗಳಿಂದ ಮಾತ್ರ ಪರೀಕ್ಷಾ ಶುಲ್ಕವನ್ನು ವಿಶ್ವವಿದ್ಯಾನಿಲಯದ ಪರವಾಗಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರು ಸಂಗ್ರಹಿಸಿ, ನಂತರ ಒಟ್ಟು ಶುಲ್ಕವನ್ನು ಕ್ರೋಢೀಕರಿಸಿ ವಿಶ್ವವಿದ್ಯಾನಿಲಯದ ನಿಧಿಗೆ **RTGS/NEFT ಮೂಲಕ ಎಸ್.ಬಿ.ಐ. ಖಾತೆ ಸಂಖ್ಯೆ 36954908103 ಗೆ ಪರೀಕ್ಷಾ ಶುಲ್ಕವನ್ನು ದಿನಾಂಕ:13.06.2025 ರೊಳಗೆ ಪಾವತಿಸಿ**, ಪಾವತಿಸಿದ ವಿವರವನ್ನು ಪ್ರಾಂಶುಪಾಲರು ದೃಢೀಕರಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವುದು. **ಪರೀಕ್ಷಾ ಶುಲ್ಕದ ಪಟ್ಟಿಯನ್ನು ದ್ವಿ ಪ್ರತಿಗಳಲ್ಲಿ (ಪರೀಕ್ಷಾಂಗ ವಿಭಾಗಕ್ಕೆ ಒಂದು ಪ್ರತಿ ಮತ್ತು ಹಣಕಾಸು ವಿಭಾಗಕ್ಕೆ ಮತ್ತೊಂದು ಪ್ರತಿ) ತಪ್ಪದೇ ಸಲ್ಲಿಸುವುದು.**

ಪ್ರಾಯೋಗಿಕ ಪರೀಕ್ಷೆಗಳನ್ನು ಸೈದ್ಧಾಂತಿಕ ಪರೀಕ್ಷೆಗಳಿಗಿಂತ ಮೊದಲು ನಡೆಸತಕ್ಕದ್ದು. ಪ್ರಾಯೋಗಿಕ ಪರೀಕ್ಷಾ ವೇಳಾಪಟ್ಟಿಯನ್ನು ಸಂಬಂಧಿಸಿದ ಪರೀಕ್ಷಾ ಮಂಡಳಿ ಅಧ್ಯಕ್ಷರುಗಳಿಂದ ಅನುಮೋದನೆ ಪಡೆದುಕೊಂಡು ಪರೀಕ್ಷಾ ಅಧೀಕ್ಷಕರು/ಪ್ರಾಂಶುಪಾಲರುಗಳು ಸಂಬಂಧಿಸಿದ ಪರೀಕ್ಷಾ ಕೇಂದ್ರಗಳಲ್ಲಿ ಪ್ರಕಟಿಸುವುದು. ಸೈದ್ಧಾಂತಿಕ **(Theory)** ಪರೀಕ್ಷೆಗಳ ವಿವರಗಳನ್ನೊಳಗೊಂಡ ವೇಳಾಪಟ್ಟಿಯನ್ನು ಮುಂದೆ ತಿಳಿಸಲಾಗುವುದು.

## ಆಂತರಿಕ ಅಂಕಗಳನ್ನು ಸಲ್ಲಿಸುವ ಕುರಿತು ಸೂಚನೆಗಳು:

ಸೈದ್ಧಾಂತಿಕ **(Theory)** ಪರೀಕ್ಷೆಗಳು ಪ್ರಾರಂಭವಾಗುವುದಕ್ಕಿಂತ ಮುಂಚಿತವಾಗಿ ಆಂತರಿಕ ಅಂಕಗಳನ್ನು ಕಾಲೇಜಿನವರು ಆನ್‌ಲೈನ್‌ನಲ್ಲಿ ನಮೂದಿಸಿ, ಆಂತರಿಕ ಅಂಕಗಳ ಪಟ್ಟಿಯನ್ನು ಮಾನ್ಯ ಕುಲಸಚಿವರು(ಪರೀಕ್ಷಾಂಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರ ಹೆಸರಿನಲ್ಲಿ ಪರೀಕ್ಷಾ ವಿಭಾಗಕ್ಕೆ ಸಲ್ಲಿಸುವುದು.

ಆಂತರಿಕ ಅಂಕಗಳನ್ನು ಸಲ್ಲಿಸುವಾಗ ಸರಿಯಾಗಿ ಪರಿಶೀಲಿಸಿ ಸಲ್ಲಿಸುವಂತೆ ಪ್ರಾಂಶುಪಾಲರುಗಳಿಗೆ ಸೂಚನೆ ನೀಡಿದ್ದರೂ ಸಹ ಪದೇ ಪದೇ ಆಂತರಿಕ ಅಂಕಗಳನ್ನು ನೀಡದೆ ಇರುವುದು/ತಪ್ಪಾಗಿ ನಮೂದಿಸುವುದು ಮರುಕಳಿಸುತ್ತಿದ್ದು, ವಿದ್ಯಾರ್ಥಿಗಳಿಗೆ ಇದರಿಂದಾಗಿ ತೊಂದರೆಗಳು ಉಂಟಾಗುತ್ತಿದೆ. ಇಂತಹ ಪ್ರಸಂಗಗಳನ್ನು ವಿಶ್ವವಿದ್ಯಾನಿಲಯವು ಗಂಭೀರವಾಗಿ ಪರಿಗಣಿಸಿದ್ದು, ಈ ಹಿಂದೆ ಸೂಚಿಸಿರುವಂತೆ ಆಂತರಿಕ ಅಂಕಗಳನ್ನು ಸಲ್ಲಿಸುವಾಗ ವಿಳಂಭವಾದಲ್ಲಿ / ಸರಿಯಾಗಿ ನೀಡದಿದ್ದಲ್ಲಿ **ದಿನವೊಂದಕ್ಕೆ ರೂ. 1,000/- (ಒಂದು ಸಾವಿರ ರೂಪಾಯಿಗಳು ಮಾತ್ರ) ಗಳಂತೆ ಗರಿಷ್ಠ ರೂ. 10,000-00 (ಹತ್ತು ಸಾವಿರ ರೂಪಾಯಿಗಳು ಮಾತ್ರ) ಗಳನ್ನು ದಂಡವಾಗಿ ವಿಧಿಸಲಾಗುತ್ತದೆ.**

ವಿದ್ಯಾರ್ಥಿಗಳಿಗೆ ಆಂತರಿಕ ಅಂಕಗಳನ್ನು ನೀಡುವುದು ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರ ಜವಾಬ್ದಾರಿಯಾಗಿದ್ದು, ಯಾವುದೇ ರೀತಿಯ ತಪ್ಪುಗಳಾಗದಂತೆ ಎಚ್ಚರಿಕೆ ವಹಿಸುವುದು. ಆಂತರಿಕ ಅಂಕಗಳನ್ನು ಆನ್‌ಲೈನ್‌ನಲ್ಲಿ ನಮೂದಿಸಿ ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಾಗ ಸಂಬಂಧಪಟ್ಟ ವಿಭಾಗಗಳ ಮುಖ್ಯಸ್ಥರು ಹಾಗೂ ಪ್ರಾಂಶುಪಾಲರು ಪರಿಶೀಲಿಸಿ ದೃಢೀಕರಿಸಿ ಸಲ್ಲಿಸುವುದು. ಫಲಿತಾಂಶ ಪ್ರಕಟಗೊಂಡ ನಂತರ ಯಾವುದೇ ಕಾರಣಕ್ಕೂ ಆಂತರಿಕ ಅಂಕಗಳನ್ನು ಬದಲಿಸುವುದಿಲ್ಲ. **ವಿಶ್ವವಿದ್ಯಾನಿಲಯದ ನಿಯಮಾನುಸಾರ ವಿದ್ಯಾರ್ಥಿಯು ಸ್ನಾತಕ ಪದವಿಗೆ ಪ್ರವೇಶ ಪಡೆದ ವರ್ಷದಿಂದ ಆರು ಶೈಕ್ಷಣಿಕ ವರ್ಷಗಳೊಳಗೆ ಪದವಿಯನ್ನು ಪೂರ್ಣಗೊಳಿಸಬೇಕಾಗಿರುತ್ತದೆ.**

**ಆನ್‌ಲೈನ್‌ನಲ್ಲಿ ನಮೂದಿಸುವಾಗ ಏನಾದರೂ ಸಮಸ್ಯೆಗಳು ಉಂಟಾದಲ್ಲಿ ಹೆಚ್ಚಿನ ಮಾಹಿತಿಗಾಗಿ ಪರೀಕ್ಷಾ ವಿಭಾಗದ ಗಣಕಯಂತ್ರ ವಿಭಾಗದವರನ್ನು ಕಛೇರಿ ವೇಳೆಯಲ್ಲಿ ಸಂಪರ್ಕಿಸುವುದು.**

***ವಿಶೇಷ ಸೂಚನೆ :***

- ಶೈಕ್ಷಣಿಕ ವಿಭಾಗದಿಂದ ಪ್ರವೇಶಾನುಮೋದನೆಯಾಗದ ವಿದ್ಯಾರ್ಥಿಗಳಿಂದ ಪರೀಕ್ಷಾ ಶುಲ್ಕವನ್ನು ಸಂಗ್ರಹಿಸುವಂತಿಲ್ಲ. ಒಂದು ವೇಳೆ ಸಂಗ್ರಹಿಸಿದಲ್ಲಿ ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರೇ ನೇರ ಹೊಣೆಗಾರರಾಗಿರುತ್ತಾರೆ.
- ಪ್ರಾಯೋಗಿಕ ಪತ್ರಿಕೆಗಳನ್ನು ನಮೂದಿಸುವಲ್ಲಿ ತಪ್ಪುಗಳು ಹೆಚ್ಚಾಗಿದ್ದು, ಎಚ್ಚರಿಕೆಯಿಂದ ವಿದ್ಯಾರ್ಥಿಗಳು ತೆಗೆದುಕೊಂಡಿರುವ ಪತ್ರಿಕೆಗಳನ್ನು ಸರಿಯಾಗಿ ನಮೂದಿಸಲು ಸೂಚಿಸಲಾಗಿದೆ.

**ಎಲ್ಲಾ ಪ್ರಾಂಶುಪಾಲರುಗಳು ಸಹಕರಿಸಬೇಕಾಗಿ ಕೋರಲಾಗಿದೆ.**

27/5/25

**ಕುಲಸಚಿವರು(ಪರೀಕ್ಷಾಂಗ)**

ಕುಲಸಚಿವರು (ಮೌಲ್ಯಮಾಪನ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

**ಗೆ,**

**ಪ್ರಾಂಶುಪಾಲರು, ಘಟಕ/ಎಲ್ಲಾ ಸಂಯೋಜಿತ ಸ್ನಾತಕ ಪದವಿ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.**

**ಪ್ರತಿಗಳು :**

1. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಎಂ.ಎಸ್. ಬಿಲ್ಡಿಂಗ್-2, ಡಾ. ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು.
2. ಮಾನ್ಯ ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಉಪಕುಲಸಚಿವರು(ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಮಾನ್ಯ ಕುಲಸಚಿವರ ಆಪ್ತ ಸಹಾಯಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
7. ಸಿಸ್ಟಂ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು – **ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಇಂದೇ ಪ್ರಕಟಿಸುವುದು ಹಾಗೂ ಎಲ್ಲಾ ಘಟಕ/ಸ್ನಾತಕ ಪದವಿ ಕಾಲೇಜುಗಳಿಗೆ ಇ-ಮೇಲ್ ಕಳುಹಿಸುವುದು.**
8. ಫಲಿತಾಂಶ ಗಣಕೀಕರಣ ವಿಭಾಗ, ಪರೀಕ್ಷಾ ಭವನ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
9. ಕಛೇರಿ ಪ್ರತಿ.